ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 26/2/2020

# ಬಜೆಟ್ ಬಳಿಕ ಕತ್ತಿ ಸೇರಿ ಮೂವರಿಗೆ ಸಚಿವ ಸ್ಥಾನ

## ದೆಹಲಿ ಭೇಟಿಯ ವೇಳೆ ಸುಳಿವು ನೀಡಿದ ಬಿಎಸ್‌ವೈ ಈ ಬಾರಿ ಮೂಲ ಬಿಜೆಪಿಗರಿಗೆ ಅವಕಾಶ: ಸಿಎಂ



ನವದೆಹಲಿ: ರಾಜ್ಯ ಸಚಿವ ಸಂಪುಟ ವಿಸ್ತರಣೆ ಮತ್ತೆ ವಿಸ್ತರಣೆಯಾಗಲಿದೆ, ಹಿರಿಯ ಶಾಸಕ ಉಮೇಶ್ ಕತ್ತಿ ಸೇರಿದಂತೆ ಮೂವರಿಗೆ ಅವಕಾಶ ಸಿಗಲಿದೆಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜತೆಗಿನ ಔತಣಕೂಟದಲ್ಲಿ ಪಾಲ್ಗೊಳ್ಳಲು ಮಂಗಳವಾರ ದೆಹಲಿಗೆ ಆಗಮಿಸಿದ್ದ ಅವರು ಸುದ್ದಿಗಾರರ ಜತೆಗೆ ಮಾತನಾಡಿ, ಬಜೆಟ್ ಅಧಿವೇಶನದ ಬಳಿಕ ಮತ್ತೊಂದು ಸುತ್ತಿನ ಸಚಿವ ಸಂಪುಟ ವಿಸ್ತರಣೆಯ ಸುಳಿವು ನೀಡಿದರು. 'ರಾಜ್ಯ ಬಜೆಟ್ ಅಧಿವೇಶನ ಮತ್ತೆ ವಿಸ್ತರಣೆಯಾಗಲಿದೆ. ಹುಕ್ಕೇರಿ ಶಾಸಕ ಉಮೇಶ್ ಕತ್ತಿ ಸೇರಿದಂತೆ ಮೂವರು ಶಾಸಕರಿಗೆ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಲಾಗುವುದು ಎಂದು ಹೇಳಿದರು. ಅನ್ಯ ಪಕ್ಷ ದಿಂದ ಬಿಜೆಪಿಗೆ ಸೇರ್ಪಡೆಯಾ ಗಿರುವ 10 ಮಂದಿಯನ್ನು ಈಗಾಗಲೇ ಪಕ್ಷಕ್ಕೆಸೇರ್ಪಡೆ ಮಾಡಲಾಗಿದೆ. ಬಜೆಟ್ ಅಧಿವೇಶನ ಬಳಿಕ ಪಕ್ಷದ ಶಾಸಕರಿಗೆ ಅವಕಾಶ ದೊರೆಯಲಿದೆ ಎಂದು ಯಡಿಯೂರಪ್ಪ ತಿಳಿಸಿದರು.